(1 ಗಂಟೆ 51 ನಿಮಿಷಕ್ಕೆ ಸದನ ಮುಂದೂಡಲ್ಪಟ್ಟು ಪುನಃ ಮಧ್ಯಾಹ್ನ 3 ಗಂಟೆಗೆ ಸೇರಲು ನಿರ್ಧರಿಸಿತು).

(ಸಭೆಯು 3 ಗಂಟೆ 10 ನಿಮಿಷಕ್ಕೆ ಸಮಾವೇಶಗೊಂಡಿತು)

(ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣರವರು) ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು)

8. ಸದಸ್ಯರಿಂದ ಪ್ರಮಾಣ ವಚನ ಸ್ವೀಕಾರ ಅಥವಾ ಪ್ರತಿಜ್ಞಾ ವಚನ ಸ್ವೀಕಾರ:–

ಶ್ರೀ ಡಿ.ಕೆ. ಶಿವಕುಮಾರ್ (ಸಾತನೂರು):– "ಡಿ.ಕೆ. ಶಿವಕುಮಾರ್ ಎಂಬ ಹೆಸರಿನವನಾದ ನಾನು ವಿಧಾನ ಸಭೆಯ ಸದಸ್ಯನಾಗಿ ನಿರ್ವಾಚನ ಹೊಂದಿದವನಾಗಿ ವಿಧಿದ್ವಾರಾ ಸ್ಥಾಪಿತವಾದ ಭಾರತದ ಸಂವಿಧಾನದ ವಿಷಯದಲ್ಲಿ ಶ್ರದ್ಧೆಯಿಂದಲೂ, ನಿಷ್ಠೆಯಿಂದಲೂ ಕೂಡಿರುತ್ತೇನೆಂದೂ, ನಾನು ಭಾರತದ ಪರಮಾಧಿಕಾರವನ್ನು ಮತ್ತು ಸಮಗ್ರತೆಯನ್ನು ಸಮರ್ಥಿಸುತ್ತೇನೆಂದೂ, ನಾನು ಈಗ ಕೈಗೊಳ್ಳಲಿರುವ ಕರ್ತವ್ಯವನ್ನು ಶ್ರದ್ಧಾಪೂರ್ವಕವಾಗಿ ನಿರ್ವಹಿಸುತ್ತೇನೆಂದೂ ಭಗವಂತನ ಹೆಸರಿನ ಮೇಲೆ ಪ್ರಮಾಣ ಮಾಡುತ್ತೇನೆ."

9. ಪ್ರಕಟಣೆ

ಅಧ್ಯಕ್ಷರು:– ಮೂಡಬಿದ್ರೆ ವಿಧಾನಸಭೆ ಸದಸ್ಯರಾದ ಶ್ರೀ ಕೆ. ಅಭಯಚಂದ್ರ ಅವರನ್ನು ವಿಧಾನ ಸಭೆಯಲ್ಲಿ ಸರ್ಕಾರಿ ಮುಖ್ಯ ಸಚೇತಕರನ್ನಾಗಿ ನೇಮಿಸಲಾಗಿದೆಯೆಂದು ಮಾನ್ಯ ಮುಖ್ಯ ಮಂತ್ರಿಗಳು ತಿಳಿಸಿರುತ್ತಾರೆ. ಈ ವಿಷಯವನ್ನು ಸದನದ ಗಮನಕ್ಕೆ ತರಲಾಗಿದೆ. ಭಾರತೀಯ ಜನತಾ ಪಕ್ಷದ ಶಾಸಕಾಂಗ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಯಡಿಯೂರಪ್ಪನವರು ಈ ದಿನ 14--6–2004ರಂದು ಪತ್ರವನ್ನು ನೀಡಿದ್ದು, ಭಾರತೀಯ ಜನತಾ ಪಕ್ಷದ ಶಾಸಕಾಂಗ ಪಕ್ಷದ ಪದಾಧಿಕಾರಿಗಳನ್ನಾಗಿ ಕೆಳಕಂಡ ಶಾಸಕರನ್ನು ನೇಮಕ ಮಾಡಲಾಗಿದೆಯೆಂದು ತಿಳಿಸಿರುತ್ತಾರೆ.

ಶ್ರೀಯುತರುಗಳಾದ: ಗೋವಿಂದ ಕಾರಜೋಳ, ಶಾಸಕರು (ಮುಧೋಳ) ಉಪ ನಾಯಕರು
ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರು (ಅಂಕೋಲ), ಕಾರ್ಯದರ್ಶಿ
ಕೆ.ಟಿ.ಶಿವಸುಬ್ರಮಣ್ಯನಾಯ್ಡು, ಶಾಸಕರು (ಶಿವಾಜಿನಗರ) ಮುಖ್ಯ ಸಚೇತಕರು
ನಾಗರಾಜಶೆಟ್ಟಿ, ಶಾಸಕರು (ಭಂಟ್ವಾಳ), ಕೋಶಾಧ್ಯಕ್ಷರು

10. ನಿಲುವಳಿ ಸೂಚನೆ (ಮುಂದು):

ವಿಷಯ: ಕೂಲಿಗಾಗಿ ಕಾಳು ಯೋಜನೆಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ

ಅಧ್ಯಕ್ಷರು:– ಈಗ ಏನು ನಿಲುವಳಿ ಸೂಚನೆ ಕೊಟ್ಟಿದ್ದಾರೆ ಅದರ ಮೇಲೆ ಶ್ರೀಯುತ ಜೆ.ಸಿ. ಮಾಧುಸ್ವಾಮಿಯವರು ಮಾತನಾಡಲಿ.

ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ):– ಮಾನ್ಯ ಅಧ್ಯಕ್ಷರೇ,

ಶ್ರೀ ಬಸವರಾಜರಾಯರೆಡ್ಡಿ:– ಮಾನ್ಯ ಅಧ್ಯಕ್ಷರೇ, ತಮ್ಮ ಅಪ್ಪಣೆ ಮೇರೆಗೆ ಈ ಸದನದ ಮಾನ್ಯ ಸದಸ್ಯರಾದಂತಹ ಶ್ರೀ ಅರಗ ಜ್ಞಾನೇಂದ್ರರವರು ನಿಲುವಳಿ ಸೂಚನೆಯ ಮೇಲೆ ಮಾತನಾಡುವಂತಹ ಸಂದರ್ಭದಲ್ಲಿ ಅನ್ ಪಾರ್ಲಿಮೆಂಟರಿ ವರ್ಡ್ ಅಥವಾ ಜೊತೆಗೆ ಸರ್ಕಾರದ ಮೇಲೆ ಆಪಾದನೆಯನ್ನು ಮಾಡಿದರು. ಅವರು ತಮ್ಮ ಭಾಷಣದಲ್ಲಿ ಏನು ಹೇಳಿದ್ದಾರೆಂದರೆ "ನಾನು ಹೇಳುತ್ತೇನೆ ಇವತ್ತು xxx ಅವರು ಹೇಳಬೇಕಾಗುತ್ತದೆಂದು" ಎನ್ನುವ ಮಾತನ್ನು ಹೇಳಿದರು.

---

xxx ಅಧ್ಯಕ್ಷರ ಆದೇಶದ ಮೇರೆಗೆ ಕಡತದಿಂದ **ತೆಗೆದು ಹಾಕಲಾಗಿದೆ.**